ದಿನಾಂಕಃ 16.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರಿದ ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ,**

ನನ್ನ ತಂಗಿ ಗೃಹಿಣಿಯಾಗಿರುತ್ತಾರೆ. ಆರೋಪಿ ನನ್ನಿಂದ ಹಣವನ್ನು ಸಾಲವಾಗಿ ಪಡೆದುಕೊಂಡು ಚೆಕ್ಕು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಕೆ ಆರ್ ಪೇಟೆ ತಾಲ್ಲೂಕಿನ ಪ್ರಸನ್ನ ಕುಮಾರ್ ನನಗೆ ಪರಿಚಯ ಇರುತ್ತಾರೆ ಎಂದರೆ ಸರಿಯಲ್ಲ. ಪಿರಿಯಾಪಟ್ಟಣ ತಾಲ್ಲೂಕಿನ ಮಂಜುನಾಥರವರು ನನಗೆ ಪರಿಚಯ ಇರುವುದಿಲ್ಲ. ಆರೋಪಿ ಮತ್ತು ಪ್ರಸನ್ನ ಕುಮಾರ್ ನಡುವೆ ಜಮೀನಿನ ವಿಚಾರವಾಗಿ ಕರಾರು ಆಗಿದ್ದು, ಆ ಸಮಯದಲ್ಲಿ ನಾನು ಹಾಜರು ಇರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ಮತ್ತು ಆರೋಪಿಯ ಮಕ್ಕಳು ಕರಾರು ಪತ್ರಕ್ಕೆ ಸಹಿ ಹಾಕದ ಕಾರಣ ನಾನು, ಪ್ರಸನ್ನಕುಮಾರ್ ಮತ್ತು ಮಂಜುನಾಥರವರು ಆರೋಪಿಯಿಂದ ಸಹಿ ಮಾಡಿದ ಮೂರು ಖಾಲಿ ಚೆಕ್ಕುಗಳನ್ನು ಪಡೆದುಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಚೆಕ್ಕುಗಳನ್ನು ದುರುಪಯೋಗ ಪಡಿಸಿಕೊಂಡು ಪ್ರಸನ್ನ ಕುಮಾರ್ ರವರು ನನ್ನ ಮತ್ತು ಮಂಜುನಾಥ ರವರ ಮೂಲಕ ಆರೋಪಿಯ ವಿರುದ್ಧ ಪ್ರಕರಣಗಳನ್ನು ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ. ಕರಾರು ಪತ್ರ ಅನುಷ್ಟಾನಗೊಳ್ಳದ ಕಾರಣ ನನ್ನ ಮೂಲಕ ಈ ಪ್ರಕರಣ ದಾಖಲಿಸಿದ್ದಾರೆ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.